46

**ನಿಯಮ 330 ರಡಿ ಶ್ರೀ ಎನ್ ರವಿಕುಮಾರ್ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು, ಕರ್ನಾಟಕ ವಿಧಾನ ಪರಿಷತ್ತು ಇವರ ಸೂಚನೆಗೆ ಮಾಹಿತಿ.**

**ವಿಷಯ:**

ರಾಜ್ಯದಲ್ಲಿ ರಸಗೊಬ್ಬರ ಕಾಳಸಂತೆಯಲ್ಲಿ ಮಾರಾಟವಾಗುತ್ತಿದೆ ಎಂಬ ಗಂಭೀರ ಆರೋಪ ಕೇಳಿಬರುತ್ತಿರುವುದಕ್ಕೆ ಪೂರಕವಾಗಿ ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ಬಳಿ ಕೇರಳಕ್ಕೆ ರವಾನೆಯಾಗುತ್ತಿದ್ದ ಯೂರಿಯಾ ತುಂಬಿದ ಲಾರಿಯನ್ನು ವಶಪಡಿಸಿಕೊಂಡಿರುವ ಕುರಿತು ದಿನಪತ್ರಿಕೆಗಳಲ್ಲಿ ವರದಿ ಬಂದಿದ್ದು, ಮಳೆಗಾಲದ ಈ ಸಮಯದಲ್ಲಿ ಕೃಷಿ ಚಟುವಟಿಕೆಗಳು ಬಿರುಸಿನಿಂದ ನಡೆಯುತ್ತಿರುವ ಇಂತಹ ಸಮಯದಲ್ಲಿ ಯೂರಿಯ ಸೇರಿ ಇತರೆ ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಅಕ್ರಮವಾಗಿ ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿಸಿ ಹೊರ ರಾಜ್ಯಗಳಿಗೆ ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದ್ದು, ಈವರೆಗೂ ಈ ಅಕ್ರಮ ನಿಯಂತ್ರಿಸದೇ, ಕೃಷಿ ಚಟುವಟಿಕೆಗಳಿಗೆ ಸಕಾಲದಲ್ಲಿ ರಸಗೊಬ್ಬರ ಹಾಗೂ ಕೀಟನಾಶಕ ಒದಗಿಸದೇ ರಾಜ್ಯದ ರೈತರಿಗೆ ಅನ್ಯಾಯ ಮಾಡುತ್ತಿದ್ದು, ಈ ಕುರಿತು ಸಮಗ್ರ ಚರ್ಚೆ ನಡೆಸಲು ನಿಯಮ 330 ರಡಿ ಅನುಮತಿ ನೀಡುವಂತೆ ಕೋರುತ್ತೇನೆ.

**ಉತ್ತರ:**

ರಸಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟವಾಗುವುದನ್ನು/ಇತರೆ ಉಲ್ಲಂಘನೆಗಳನ್ನು ತಡೆಯಲು ರಸಗೊಬ್ಬರ (ನಿಯಂತ್ರಣ) ಆದೇಶ, 1985ರಡಿ ರಸಗೊಬ್ಬರ ಪರಿವೀಕ್ಷಕರನ್ನು ಅಧಿಸೂಚಿಸಲಾಗಿರುತ್ತದೆ. ಅಲ್ಲದೇ, ರಾಜ್ಯದಲ್ಲಿ ಅಪರ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ಜಾಗೃತಕೋಶ ಸೃಜಿಸಲಾಗಿದೆ ಮತ್ತು ಇವರ ಅಧೀನದಲ್ಲಿ ರಾಜ್ಯದ 4 ಕಂದಾಯ ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು (ಜಾಗೃತ ಕೋಶ) ಕಾರ್ಯನಿರ್ವಹಿಸುತ್ತಿದ್ದಾರೆ. ಜಾಗೃತಕೋಶದ ಅಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ಮತ್ತು ಅಧಿಸೂಚಿಸಿರುವ ರಸಗೊಬ್ಬರ ಪರಿವೀಕ್ಷಕರು ದೂರುಗಳನ್ನು ಆಧರಿಸಿ/ ಅನಿರೀಕ್ಷಿತವಾಗಿ/ಆಗಿಂದ್ದಾಗ್ಗೆ ಅವರ ವ್ಯಾಪ್ತಿಯಲ್ಲಿ ಯೂರಿಯಾ ಅಥವಾ ಇತರೆ ರಸಗೊಬ್ಬರಗಳನ್ನು ಅಕ್ರಮವಾಗಿ ದಾಸ್ತಾನು/ಸಾಗಾಣಿಕೆ ಮಾಡಿ ಕೃತಕ ಅಭಾವ ಸೃಷ್ಟಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ಮುಕ್ತ ಮಾರುಕಟ್ಟೆಯಲ್ಲಿ ಪೀಡೆನಾಶಕಗಳು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ಯಾವುದೇ ಕೃತಕ ಅಭಾವ ಸೃಷ್ಟಿಯಾಗಿರುವ ಹಾಗೂ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಸನ್ಮಾನ್ಯ ಮುಖ್ಯಮಂತ್ರಿರವರ ನಿರ್ದೇಶನದಂತೆ, ಕೃಷಿ, ಕಂದಾಯ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ರಸಗೊಬ್ಬರದ ಅನಧಿಕೃತ ಶೇಖರಣೆ/ಸಂಗ್ರಹಣೆ, ಕಾಳಸಂತೆಯಲ್ಲಿ ಮಾರಾಟದ ಬಗ್ಗೆ ಪರಿಶೀಲನೆಯನ್ನು ಕೈಗೊಂಡು ತಪ್ಪಿತಸ್ಥರ ವಿರುದ್ಧ ರಸಗೊಬ್ಬರ (ನಿಯಂತ್ರಣ), ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955 ರನ್ವಯ ಕ್ರಮ ಜರುಗಿಸುತ್ತಿದ್ದಾರೆ.

ಇತರೆ ರಾಜ್ಯದ ಗಡಿ ಹೊಂದಿರುವ ಜಿಲ್ಲೆಗಳ ಚೆಕ್‌ಪೋಸ್ಟ್‌ಗಳಲ್ಲಿ ಅನಧಿಕೃತವಾಗಿ/ಅಕ್ರಮವಾಗಿ ಯೂರಿಯಾ ಹಾಗೂ ಇನ್ನಿತರೆ ರಸಗೊಬ್ಬರಗಳ ಸಾಗಾಣಿಕೆಯ ಬಗ್ಗೆ ಕೃಷಿ ಇಲಾಖೆ ಮತ್ತು ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಲು ಸಂಬಂಧಪಟ್ಟ ಇಲಾಖೆಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ನಿರ್ದೇಶನ ನೀಡಿ ಕಟ್ಟುನಿಟ್ಟಿನ ಕ್ರಮವಹಿಸಲಾಗುತ್ತಿದೆ.

ಕೃಷಿಗೆ ಬಳಸುತ್ತಿರುವ ಸಹಾಯಧನದ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಕೆಯಾಗುವುದನ್ನು ತಡೆಯಲು ಜಿಲ್ಲಾ ಮಟ್ಟದಲ್ಲಿ ಕೃಷಿ ಇಲಾಖೆ, ಪೊಲೀಸ್ ಇಲಾಖೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕಂದಾಯ ಇಲಾಖೆ ಹಾಗೂ ಇತರೆ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತಂಡಗಳನ್ನು ರಚಿಸಿ ಜಿಲ್ಲಾಧಿಕಾರಿಗಳಿಂದ ಆದೇಶ ಹೊರಡಿಸಲಾಗಿದೆ. ಸದರಿ ತಂಡಗಳು ಯೂರಿಯಾ ಬಳಸುತ್ತಿರುವ ಕೈಗಾರಿಕೆಗಳನ್ನು ಪರಿಶೀಲಿಸುತ್ತಿದ್ದು, ಕೃಷಿಗೆ ಬಳಸುವ ಸಹಾಯಾಧನದ ಯೂರಿಯಾವನ್ನು ಬಳಸುತ್ತಿದ್ದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ವಹಿಸಲಾಗುತ್ತಿದೆ.

2021-22 ರಿಂದ 2024-25ನೇ ಸಾಲಿನವರೆಗೆ ಅಕ್ರಮವಾಗಿ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಕೆ ಹಾಗೂ ಅನಧಿಕೃತ ಮಾರಾಟಕ್ಕೆ ಸಂಬಂಧಿಸಿದಂತೆ ಒಟ್ಟು 32 ಎಫ್.ಐ.ಆರ್ ಗಳನ್ನು ಹಾಗೂ ಪ್ರಸಕ್ತ ಸಾಲಿನಲ್ಲಿ (11.08.2025 ರವರೆಗೆ) ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲ್ಲೂಕಿನ ಪ್ರಕರಣವನ್ನು ಒಳಗೊಂಡಂತೆ ಒಟ್ಟು 06 (ಆರು) ಎಫ್.ಐ.ಆರ್ ಗಳನ್ನು ದಾಖಲಿಸಲಾಗಿರುತ್ತದೆ. ಒಟ್ಟಾರೆ 38 ಪ್ರಕರಣಗಳಿಗೆ ಸಂಬಂಧಿಸಿದಂತೆ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಿ ನಿಯಮಾನುಸಾರ ಮುಂದಿನ ಕ್ರಮ ವಹಿಸಲಾಗುತ್ತಿದೆ.

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು

ಸಂಖ್ಯೆ: AGRI/262/ACT/2025